ಕರ್ನಾಟಕ ಸರ್ಕಾರ
(ಕಂದಾಯ ಇಲಾಖೆ)
ತಹಶೀಲ್ದಾರವರ ನ್ಯಾಯಾಲಯ ಕೂಡ್ಲಿಗಿ

ಸಂ/ಕಂ/ಪಹಣಿ:ವಿವಾದ/09/2016-17 ದಿನಾಂಕ: 27-07-2016.

| ವಾದಿಗಳು | ಪ್ರತಿವಾದಿಗಳು |
|---|---|
| ಈರಬಾಲಪ್ಪ ತಂದೆ ಲೇಟ್ ರಂಗಪ್ಪ<br>ಗೋವಿಂದಗಿರಿ ಗ್ರಾಮ<br>ಕೂಡ್ಲಿಗಿ ತಾಲೂಕು | ಕಂದಾಯ ಪರಿವೀಕ್ಷಕರು<br>ಕೂಡ್ಲಿಗಿ |

ಕೂಡ್ಲಿಗಿ ತಾಲೂಕು ಅಮರದೇವರಗುಡ್ಡ ಗ್ರಾಮದ ಸನಂ 150ಎ. ವಿಸ್ತೀರ್ಣ 3-52. ಎಕ್ರೆ ಜಮೀನನ್ನು ಪೋತಿವಾರಸು ಪ್ರಕಾರ ಹಕ್ಕು ಬದಲಾವಣೆ ಮಾಡುವ ಬಗ್ಗೆ.

ಪ್ರಸ್ತಾವನೆ:

ಕೂಡ್ಲಿಗಿ ತಾಲೂಕು ಅಮರದೇವರಗುಡ್ಡ ಗ್ರಾಮದ ಸನಂ 150ಎ. ವಿಸ್ತೀರ್ಣ 3-52. ಎಕ್ರೆ ಜಮೀನನ್ನು ಸದರಿ ತಾಲೂಕು ಗೋವಿಂದಗಿರಿ ಗ್ರಾಮದ ಈರಬಾಲಪ್ಪ ತಂದೆ ರಂಗಪ್ಪ ಇವರು ಪೋತಿವಾರಸು ಪ್ರಕಾರ ಹಕ್ಕು ಬದಲಾವಣೆ ಮಾಡಲು ಕೋರಿ ಅರ್ಜಿ ಸಲ್ಲಿಸಿರುತ್ತಾರೆ. ಈ ಬಗ್ಗೆ ಗ್ರಾಮಲೆಕ್ಕಿಗರು ಅಮರದೇವರಗುಡ್ಡ ಇವರು ನಮೂನೆ-21 ರ ನೋಟಿಸನ್ನು ದಿನಾಂಕ 02-04-2016. ರಂದು ಗ್ರಾಮದಲ್ಲಿ ಪ್ರಚೂರು ಪಡಿಸಿ ಹಾಗೂ ಸಂಬಂಧಪಟ್ಟವರಿಗೆ ಜಾರಿ ಮಾಡಲಾಗಿ ವಂಶವೃಕ್ಷ ತಾಳೆ ಇಲ್ಲದ ಕಾರಣ ಈ ಪ್ರಕರಣದ ಎಂ.ಆರ್.ನಂಬರ್: 18/2015-16. ದಿನಾಂಕ 03-05-2015 ರಲ್ಲಿ ಗೈರು ಮಂಜೂರು ಮಾಡಿ ಮುಂದಿನ ಕ್ರಮಕ್ಕೆ ಈ ಕಾರ್ಯಾಲಯಕ್ಕೆ ಕಳುಹಿಸಿ ಕೊಟ್ಟಿರುತ್ತಾರೆ.

ಈ ಪ್ರಕರಣವನ್ನು ಈ ಕಾರ್ಯಾಲಯದಲ್ಲಿ ವಿಚಾರಣೆ ಮಾಡುವ ದಿಸೆಯಲ್ಲಿ ಉಭಯ ಪಕ್ಷದವರಿಗೂ ನೋಟಿಸ್ಸು ನೀಡಿ ದಿನಾಂಕ 15-06-2016 ರಿಂದ 27-07-2016. ರ ವರೆಗೆ ವಿಚಾರಣೆ ಮಾಡಲಾಯಿತು.

ವಿಚಾರಣೆ ಸಮಯದಲ್ಲಿ ಅರ್ಜಿದಾರರು ಹಾಗೂ ಅವರ ಪರ ನ್ಯಾಯಾವಾದಿಗಳು ಹಾಜರಾಗಿರುತ್ತಾರೆ. ಅರ್ಜಿದಾರರ ಪರ ನ್ಯಾಯಾವಾದಿಗಳು ಅಮರದೇವರಗುಡ್ಡ ಗ್ರಾಮದ ಸನಂ 150ಎ. ವಿಸ್ತೀರ್ಣ 3-52. ಎಕ್ರೆ ಜಮೀನು ಅರ್ಜಿದಾರರ ಅಜ್ಜನಾದ ಬಡಪ್ಪ ಮತ್ತು ಅವರ ಅಣ್ಣನಾದ ಕರಿಯಪ್ಪ ಇವರ ಹೆಸರಲ್ಲಿ ಜಂಟಿ ಪಟ್ಟಾ ಲೆಕ್ಕ ದಾಖಲೆ ಇರುತ್ತದೆ. ಇವರು ದಿನಾಂಕ 10-11-1987 ರಂದು ಹಾಗೂ ಇವರ ಹೆಂಡತಿ ಚಿತ್ತವ್ವ ಗಂಡ ಬಡಪ್ಪ ಇವರು ಸಹಾ ನಿಧನ ಹೊಂದಿರುತ್ತಾರೆ.ಹಾಗೂ ಅರ್ಜಿದಾರರ ತಂದೆಯವರಾದ ರಂಗಪ್ಪ ತಂದೆ ಬಡಪ್ಪ ಇವರು ದಿನಾಂಕ 01-03-1995 ರಂದು ಹಾಗೂ ಅರ್ಜಿದಾರರ ತಾಯಿಯವರಾದ ಕರಿಯವ್ವ ಗಂಡ ರಂಗಪ್ಪ ಇವರು ಸಹಾ ನಿಧನ ಹೊಂದಿರುತ್ತಾರೆ. ಮತ್ತು ಅರ್ಜಿದಾರರ ಅಜ್ಜನಾದ ಕರಿಯಪ್ಪ ಇವರು ದಿನಾಂಕ 08-09-1985 ರಂದು ಹಾಗೂ ಇವರ ಹೆಂಡತಿ ಬಾಲವ್ವ ಗಂಡ ಕರಿಯಪ್ಪ ಇವರು ಮತ್ತು ಇವರ ಮಗನಾದ ಈರಪ್ಪ ತಂದೆ ಕರಿಯಪ್ಪ ಇವರು ಮತ್ತು ಇವರ ಹೆಂಡತಿ ದ್ಯಾಮವ್ವ ಇವರು ಸಹಾ ನಿಧನ ಹೊಂದಿರುತ್ತಾರೆ. ಇವರಿಗೆ ಸಂತಾನ ಇರುವುದಿಲ್ಲ ಕಾರಣ ಪೋತಿವಾರಸು ಹಕ್ಕಿನ ಪ್ರಕಾರ ಅರ್ಜಿದಾರರ ಹೆಸರಲ್ಲಿ ಹಕ್ಕು ಬದಲಾವಣೆ ಮಾಡಬೇಕೆಂದು ಕೋರಿರುತ್ತಾರೆ.

ಮೇಲಿನ ಎಲ್ಲಾ ಅಂಶಗಳನ್ನು ಗಣನಗೆ ತೆಗೆದು ಕೊಂಡು ಸದರಿ ವಿವಾದಿತ ಜಮೀನಿನ ಕಂದಾಯ ಲೆಕ್ಕಗಳನ್ನು ಪರಿಶೀಲಿಸಿ ಅರ್ಜಿದಾರರ ಪರ ನ್ಯಾಯಾವಾದಿಗಳ ಹೇಳಿಕೆಗಳನ್ನು ಕೇಳಿ ಅರ್ಜಿದಾರರು ಸೂಕ್ತ ದಾಖಲೆಗಳನ್ನು ಸಲ್ಲಿಸಿಲ್ಲದ ಕಾರಣ ಅರ್ಜಿದಾರರ ಕೋರಿಕೆಯನ್ನು ತಿರಸ್ಕರಿಸುತ್ತಾ ಕಾರಣ ಈ ಕೆಳಗಿನಂತೆ ಆದೇಶ ಮಾಡಲಾಗಿದೆ.

## -:ಆದೇಶ:-

ಮೇಲೆ ವಿವರಿಸಿದ ಸಂದರ್ಭ ವಾಸ್ತುವಾಂಶ ಮತ್ತು ಕಾರಣಗಳಿಂದ ಕೂಡ್ಲಿಗಿ ತಾಲೂಕು ಅಮರದೇವರಗುಡ್ಡ ಗ್ರಾಮದ ಸನಂ 150ಎ. ವಿಸ್ತೀರ್ಣ 3-52. ಎಕ್ರೆ ಜಮೀನಿನ ಅರ್ಜಿದಾರರು ಸೂಕ್ತ ದಾಖಲೆಗಳನ್ನು ಸಲ್ಲಿಸಿಲ್ಲದ ಕಾರಣ ಅರ್ಜಿದಾರರ ಕೋರಿಕೆಯನ್ನು ತಿರಸ್ಕರಿಸುತ್ತಾ ಯಥಾಸ್ಥಿತಿಯಂತೆ ಮುಂದುವರೆಸಲು ಆದೇಶಿಸಿ ಈ ಪ್ರಕರಣವನ್ನು ಈ ಕಾರ್ಯಾಲಯದಲ್ಲಿ ಈ ಹಂತದಲ್ಲಿ ಮುಕ್ತಾಯಗೊಳಿಸಲು ಆದೇಶಿಸಲಾಗಿದೆ.

ಈ ಆದೇಶವನ್ನು ಹೇಳಿ ಬೆರಳಚ್ಚುಗಾರರಿಂದ ಬೆರಳಚ್ಚು ಮಾಡಿಸಿ ತಪ್ಪುಗಳನ್ನು ತಿದ್ದಿ ದಿನಾಂಕ 27-07-2016 ರಂದು ತೆರೆದ ನ್ಯಾಯಾಲಯದಲ್ಲಿ ಘೋಷಿಸಲಾಯಿತು.

ತಹಶೀಲ್ದಾರರು
ಕೂಡ್ಲಿಗಿ

ಇದರ ಪ್ರತಿಯನ್ನು:

1) ಅರ್ಜಿದಾರರಾದ ಈರಬಾಲಪ್ಪ ತಂದೆ ಲೇಟ್ ರಂಗಪ್ಪ ಗೋವಿಂದಗಿರಿ ಗ್ರಾಮ ಕೂಡ್ಲಿಗಿ ತಾಲೂಕು ಇವರ ಪರ ವಕೀಲರಾದ ಎ.ಶಿವರಾಜ್ ವಕೀಲರು ಕೂಡ್ಲಿಗಿ ಇವರ ದ್ವಾರ ಕಳುಹಿಸಿ ಕೊಡಲಾಗಿದೆ.
2) ಕಂದಾಯ ಪರಿವೀಕ್ಷಕರು ಕೂಡ್ಲಿಗಿ ಇವರ ಮಾಹಿತಿಗಾಗಿ ಕಳುಹಿಸಿ ಕೊಡಲಾಗಿದೆ.
3) ಗಣಕೀಕರಣ ವಿಭಾಗ ತಾಲೂಕು ಕಚೇರಿ ಕೂಡ್ಲಿಗಿ ಇವರ ಮುಂದಿನ ಕ್ರಮಕ್ಕಾಗಿ ಕಳುಹಿಸಿ ಕೊಡಲಾಗಿದೆ.
4) ಅಪೀಲು ಅವಧಿ 60 ದಿವಸ ಇರುತ್ತದೆ.

ತಹಶೀಲ್ದಾರರ ಕಾರ್ಯಾಲಯ

ದೃಢೀಕೃತ ನಕಲು

ಶಿರಸ್ತೇದಾರರು
ತಾಲೂಕು ಕಛೇರಿ
ಕೂಡ್ಲಿಗಿ.